# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 352 |
| ಸದಸ್ಯರ ಹೆಸರು | : | ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23.09.2020. |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು-ಕುಶಾಲನಗರ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗಿದೆಯೇ; ಈ ಬಗ್ಗೆ ಸರ್ವೇ ಕಾರ್ಯ ಪೂರ್ಣಗೊಂಡಿದೆಯೇ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು; ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು; | ಮೈಸೂರು-ಕುಶಾಲನಗರ ರಸ್ತೆಯ ಅಗಲೀಕರಣ ಕಾಮಗಾರಿಯನ್ನು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳಲಾಗುತ್ತಿದೆ. ಸದರಿಯವರು ಈ ಕೆಳಕಂಡಂತೆ ವರದಿ ಮಾಡಿರುತ್ತಾರೆ.<br>ಮೈಸೂರು-ಕುಶಾಲನಗರ 92.00 ಕಿಮೀ ಉದ್ದದ ರಸ್ತೆಯ ಯೋಜನಾ ವಿಸ್ತೃತ ವರದಿಯು ತಯಾರಿಕಾ ಹಂತದಲ್ಲಿದೆ.<br>ಯೋಜನೆಗೆ ಅಗತ್ಯವಿರುವ ಜಮೀನುಗಳ ಭೂಸ್ವಾಧೀನ ಪ್ರಸ್ತಾವನೆಯನ್ನು ಅನುಮೋದನೆಗಾಗಿ ಭಾರತೀಯ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರದ ಕೇಂದ್ರ ಕಚೇರಿಗೆ ಕಳುಹಿಸಲಾಗಿದೆ. ROW ಪರಿಮಿತಿಯನ್ನು ಕಲ್ಲುಗಳನ್ನು ಕೂಡಿಸಿ ನಿಗದಿಪಡಿಸುವ ಕಾಮಗಾರಿಯು ಮುಗಿದಿರುತ್ತದೆ.<br>ಯೋಜನಾ ವರದಿಯ ಅನುಸಾರ ಈ ರಸ್ತೆ ಅಭಿವೃದ್ಧಿಯ ಅಂದಾಜು ಮೊತ್ತವು ರೂ.3883.00 ಕೋಟಿಗಳಾಗುತ್ತದೆ (ರಸ್ತೆ ಅಭಿವೃದ್ಧಿ ಮತ್ತು ಭೂಸ್ವಾಧೀನ ವೆಚ್ಚ ಸೇರಿದಂತೆ).<br>ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕೇಂದ್ರ ಕಚೇರಿಯಿಂದ ಅನುಮೋದನೆ ದೊರೆತ ನಂತರ ಭೂಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು. ಇಲ್ಲಿಯವರೆಗೆ ನಾಲ್ಕು ತಾಲೂಕುಗಳ ಭೂಸ್ವಾಧೀನ ಪ್ರಕ್ರಿಯೆ 3(A) ಮುಕ್ತಾಯಗೊಂಡಿದ್ದು, JMC ಪ್ರಗತಿಯಲ್ಲಿರುತ್ತದೆ. |
| ಆ) | ಹುಣಸೂರು ನಗರದ ಮಧ್ಯೆ ಹಾದು ಹೋಗುವ ಈ ಹೆದ್ದಾರಿಯು ಹುಣಸೂರು ನಗರ ವ್ಯಾಪ್ತಿಯಲ್ಲಿ ದುಸ್ಥಿತಿಯಲ್ಲಿದ್ದು, ಈ ರಸ್ತೆಯ ದುರಸ್ತಿ ಮತ್ತು ಅಭಿವೃದ್ಧಿಗೆ ತೆಗೆದುಕೊಳ್ಳಲಾದ ಕ್ರಮಗಳೇನು? | ಹುಣಸೂರು ನಗರದ ಮಧ್ಯೆ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ-275ರ ಕಿ.ಮೀ.171.85 ರಿಂದ 190.50 ಮತ್ತು ಕಿ.ಮೀ.193.560 ರಿಂದ 199.250 ರವರೆಗಿನ ಒಟ್ಟು 24.34 ಕಿ.ಮೀ. ಹೆದ್ದಾರಿಯನ್ನು ಅಭಿವೃದ್ಧಿಪಡಿಸುವ ಕಾಮಗಾರಿಗೆ ರೂ.18.74 ಕೋಟಿಗಳಿಗೆ 2017-18ನೇ ಸಾಲಿನಲ್ಲಿ ಮಂಜೂರಾಗಿದ್ದು, ಸದರಿ ಕಾಮಗಾರಿಗೆ ನಿಯಮಾನುಸಾರ ಗುತ್ತಿಗೆ ನಿಗದಿಪಡಿಸಲಾಗಿದೆ.<br>ಹುಣಸೂರು ಪಟ್ಟಣವು ಸದರಿ ಹೆದ್ದಾರಿಯ ಕಿಮೀ.171.850 ರಿಂದ 176.00ರವರೆಗಿನ ವ್ಯಾಪ್ತಿಯಲ್ಲಿ ಬರುತ್ತಿದ್ದು, ಗುತ್ತಿಗೆದಾರರು ಕಿ.ಮೀ.193.560 ರಿಂದ ಕಿ.ಮೀ.199.250 ರವರೆಗೆ ಅಂದರೆ 5.69ಕಿಮೀ. ಉದ್ದ ರಸ್ತೆಯನ್ನು ಅಭಿವೃದ್ಧಿಗೊಳಿಸಿ, ಮಳೆ ಹಾಗೂ ಕೋವಿಡ್-19ರ ಕಾರಣದಿಂದ ಕಾಮಗಾರಿಯನ್ನು ಸ್ಥಗಿತಗೊಳಿಸಿರುತ್ತಾರೆ. ಮಳೆಗಾಲದ ನಂತರ ಕಾಮಗಾರಿಯನ್ನು ಶೀಘ್ರದಲ್ಲಿ ಪುನರ್ ಪ್ರಾರಂಭಿಸಲಾಗುವುದು ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿ ಮಾಡಿರುತ್ತಾರೆ. |

ಕಡತ ಸಂಖ್ಯೆ: ಲೋಇ 176 ಸಿಎನ್‌ಹೆಚ್ 2020 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ